ಬೆಂಗಳೂರು ದಕ್ಷಿಣದ ಕಾಂಗ್ರೆಸ್ ಅಭ್ಯರ್ಥಿ ಸೌಮ್ಯಾ ರೆಡ್ಡಿ, ಸಚಿವ ಮತ್ತು ತಂದೆ ರಾಮಲಿಂಗಾರೆಡ್ಡಿ ಮತದಾನ ಮಾಡಿದರು.

ಕುಟುಂಬ ಸಮೇತವಾಗಿ ಮತಗಟ್ಟೆ ಕೇಂದ್ರಕ್ಕೆ ಆಗಮಿಸಿದ ಮನ್ಸೂರ್ ಅಲಿ ಖಾನ್ ಅವರು ಮತದಾನದ ಬಳಿಕ ಫೋಟೊ ಕ್ಲಿಕ್ಕಿಸಿಕೊಂಡರು.



ಕಾಂಗ್ರೆಸ್ ಅಭ್ಯರ್ಥಿ ರಾಜೀವ್ ಗೌಡ, ಎಸ್.ಟಿ ಸೋಮಶೇಖರ್ ಕುಟುಂಬ ಸಮೇತ ಮತಗಟ್ಟೆಗೆ ಬಂದು ಮತದಾನ ಮಾಡಿದರು.

ರೋಷನ್ ಬೇಗ್ ಕುಟುಂಬ ಸಮೇತ ಬಂದು ಮತದಾನ ಮಾಡಿದರು.

ಸಮಾಚಾರ ಸಣ್ಣದಲ್ಲ

29ರಿಂದ ಮೇ 25ರ ವರೆಗೆ ಹೈಕೋರ್ಟ್‌ಗೆ ಬೇಸಿಗೆ ರಜೆ

ಬೆಂಗಳೂರು: ರಾಜ್ಯ ಹೈಕೋರ್ಟ್‌ಗೆ ಏಪ್ರಿಲ್ 29 ರಿಂದ ಮೇ 25ರ ವರೆಗೆ ಬೇಸಿಗೆ ರಜೆ ಇರಲಿದ್ದು, ತುರ್ತು ಪ್ರಕರಣಗಳ ವಿಚಾರಣೆ ನಡೆಸಲು ಬೆಂಗಳೂರಿನ ಪ್ರಧಾನ ಪೀಠ, ಧಾರವಾಡ ಹಾಗೂ ಕಲಬುರ್ಗಿ ಯಲ್ಲಿ ವಿಭಾಗೀಯ ಮತ್ತು ಏಕ ಸದಸ್ಯ ನ್ಯಾಯ ಮೂರ್ತಿಗಳನ್ನು ಒಳಗೊಂಡ ರಜಾ ಕಾಲೀನ ಪೀಠ ಗಳನ್ನು ರಚಿಸಲಾಗಿದೆ. ಬೆಂಗಳೂರಿನ ಪ್ರಧಾನ ಪೀಠ, ಕಲಬುರಗಿ ಮತ್ತು ಧಾರವಾಡ ಪೀಠದಲ್ಲಿ ರಜಾ ಕಾಲದ ಪೀಠಗಳು ಕಾರ್ಯ ನಿರ್ವಹಣೆ ಮಾಡಲಿವೆ. ಈ ವೇಳೆ, ತಡೆಯಾಜ್ಞೆ, ಮಧ್ಯಂತರ ನಿರ್ದೇಶನ ಮತ್ತು ತಾತ್ಕಾಲಿಕ ಪ್ರತಿ ಬಂಧಕಾದೇಶ ಇತ್ಯಾದಿ ಪ್ರಕರಣಗಳ ವಿಚಾರಣೆ ಯನ್ನು ಮಾತ್ರ ರಜಾಕಾಲೀನ ಅವಧಿಯಲ್ಲಿ ನಡೆಸ ಲಾಗುತ್ತದೆ. ಮೇಲ್ಮನವಿ, ಕ್ರಿಮಿನಲ್ ಮೇಲ್ಮನವಿ, ಕ್ರಿಮಿನಲ್ ಅರ್ಜಿ, ಸಿವಿಲ್ ರೂಪದ ಅರ್ಜಿಗಳ ವಿಚಾರಣೆ ಇರುವುದಿಲ್ಲ. ಇ- ಫೈಲಿಂಗ್ ಪೋರ್ಟಲ್ ಮೂಲಕ ಇ-ಫೈಲಿಂಗ್ ಮಾಡಬಹುದಾಗಿದೆ ಎಂದು ರಿಜಿಸ್ಟ್ರಾರ್ (ನ್ಯಾಯಾಂಗ) ಎಂ.ಚಂದ್ರಶೇಖರ್ ರೆಡ್ಡಿ ಅವರು ಅಧಿಸೂಚನೆಯಲ್ಲಿ ತಿಳಿಸಿದ್ದಾರೆ.

ಕೇಸರಿ ಟೀ ಶರ್ಟ್ ಧರಿಸಿದ ಯುವಕನ ಮೇಲೆ ಹಲ್ಲೆ

ಬೆಂಗಳೂರು: ಕೇಸರಿ ಟೀ ಶರ್ಟ್ ಧರಿಸಿ ಕುಟುಂಬಸ್ಥ ರೊಂದಿಗೆ ಮತ ಚಲಾಯಿಸಲು ಬಂದಿದ್ದ ಯುವಕನ ಮೇಲೆ ಹಲ್ಲೆ ಮಾಡಿರುವ ಘಟನೆ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಸಿ.ವಿ.ರಾಮನ್ ನಗರದ ಸುದ್ದಗುಂಟೆಪಾಳ್ಯದಲ್ಲಿ ಶುಕ್ರವಾರ ನಡೆ ದಿದೆ. ಮೋಹನ್ ಎಂಬ ಯುವಕ ಕೇಸರಿ ಶರ್ಟ್ ಧರಿಸಿ ಮತ ಚಲಾಯಿಸಲು ಕುಟುಂಬಸ್ಥರೊಂದಿಗೆ ಬಂದಿದ್ದರು. ಈ ವೇಳೆ ಕೆಲವರು ಕೇಸರಿ ಶರ್ಟ್ ಧರಿಸಿದ ಯುವಕ ಮತಗಟ್ಟೆ ಪ್ರವೇಶಿಸುವುದನ್ನು ಆಕ್ಷೇಪಿಸಿದ ಕೆಲವರು ಹಲ್ಲೆ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ನಂತರ ಈ ವಿಚಾರ ವಾಗಿ, ಬಿಜೆಪಿ ಹಾಗೂ ಕಾಂಗ್ರೆಸ್ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆದು ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಯಿತು. ಸ್ಥಳಕ್ಕೆ ಧಾವಿಸಿದ ಬೈಯ್ಯಪ್ಪನಹಳ್ಳಿ ಪೊಲೀಸರು ಪರಿಸ್ಥಿತಿ ತಿಳಿಗೊಳಿಸಿದರು.

ಎಚ್‌ಡಿಕೆಗೆ ನಮ್ಮ ಬಗ್ಗೆ ಮಾತನಾಡಲು ಮರ್ಯಾದೆ ಇದೆಯಾ? | ಎಲ್ಲರೂ ಹಣ ಹಂಚುತ್ತಿದ್ದಾರೆ; ಸೋಲಿನ ಭಯ ಅವರಿಗೆ ಬಂದಿದೆ

ಓಡಿ ಹೋಗಿರುವ ಎಚ್‌ಡಿಕೆ ರಣಹೇಡಿ: ಡಿಕೆಶಿ

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಮತ್ತೊಮ್ಮೆ ಏಕವಚನದಲ್ಲಿ ವಾಗ್ದಾಳಿ ನಡೆಸಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕುಮಾರಸ್ವಾಮಿ ಅವರನ್ನು 'ರಣ ಹೇಡಿ' ಎಂದು ಟೀಕಿಸಿದ್ದಾರೆ.

ಸದಾಶಿವನಗರದ ತಮ್ಮ ನಿವಾಸದ ಬಳಿ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಕುಮಾರಸ್ವಾಮಿಗೆ ಮಾನ-ಮರ್ಯಾದೆ ಇದೆಯೇ? ಬೆಂಗಳೂರು ಗ್ರಾಮಾಂತರದಲ್ಲಿ ಬಿಜೆಪಿ-ಜೆಡಿಎಸ್‌ನವರು ಏನೆಲ್ಲ ಹಂಚುತ್ತಿದ್ದಾರೆ ಎನ್ನುವುದನ್ನು ತೋರಿಸಲೇನು? ಹೆದರಿಕೊಂಡು ರಣಹೇಡಿ ತರ ಮಂಡ್ಯಕ್ಕೆ ಓಡಿ ಹೋಗಿದ್ದಾರೆ. ಪಾಪ ಬೆಂಗಳೂರು ಗ್ರಾಮಾಂತರದಲ್ಲಿ ಅಮಾಯಕರನ್ನು ನಿಲ್ಲಿಸಿ, ಮಂಡ್ಯಕ್ಕೆ ಕುಮಾರಸ್ವಾಮಿ ಓಡಿ ಹೋಗಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಬಿಜೆಪಿಯ ವರು ಏನನ್ನು ಹಂಚುತ್ತಿದ್ದಾರೆ ಎಂದು ತೋರಿಸಲೇ. ಅವರು ಸತ್ಯ ಹರಿಶ್ಚಂದ್ರನ ಮೊಮ್ಮಗ. ನಾನೇನು ಎನ್ನುವುದು ಜನಕ್ಕೆ ಗೊತ್ತಿದೆ. ಮುನಿರತ್ನ, ಕುಮಾರ ಸ್ವಾಮಿ ಸೇರಿದಂತೆ ಎಲ್ಲರೂ ಹಂಚುತ್ತಿದ್ದಾರೆ. ನಾವು ಹಂಚುತ್ತಿರುವುದು ನಮ್ಮ ಪ್ರಣಾಳಿಕೆ ಕಾರ್ಡ್ ಎಂದರು.

10 ಸಾವಿರ ಮೌಲ್ಯದ ಕೂಪನ್ ಕಾರ್ಡ್ ನೀಡಲಾ ಗುತ್ತಿದೆ ಎನ್ನುವ ಪ್ರಶ್ನೆಗೆ ಪ್ರತಿಕ್ರಿಯಿಸಿ, ಇಷ್ಟಾದರೂ ಭಯ ಬಂದಿದೆಯಲ್ಲ, ಹೆದರಿಕೊಂಡು ರಣ ಹೇಡಿತರ ಬೇರೆ ಕಡೆ ಹೋಗಿದ್ದಾರೆ. ಅವರೇ ಚುನಾ ವಣೆಗೆ ನಿಂತುಕೊಳ್ಳಬೇಕಿತ್ತು. ಅಮಾಯಕರನ್ನು ನಿಲ್ಲಿಸಿ ಮಂಡ್ಯಕ್ಕೆ ಓಡಿ ಹೋಗಿದ್ದಾರೆ. ಕುಮಾರಸ್ವಾಮಿ ಏನೇನು ಮಾಡುತ್ತಿದ್ದಾರೆ, ಏನೇನು ಹಂಚುತ್ತಿದ್ದಾರೆ ಎನ್ನುವುದು ನಮಗೆ ಗೊತ್ತಿಲ್ಲವೇ? ಮುನಿರತ್ನನ ಮೂಲಕ ಗೋಲ್ಡ್ ಕಾರ್ಡ್ ಮಾಡಿ ಹಂಚುತ್ತಿದ್ದಾರೆ. ಸಿನಿಮಾ ಸ್ಟೈಲ್‌ನಲ್ಲಿ ಮಾಡಿದ್ದಾರೆ. ಅವರೇಕೆ ಇಷ್ಟೊಂದು ಹತಾಶರಾಗಿದ್ದಾರೆ ಎಂದು ಪ್ರಶ್ನಿಸಿದರು.

ಹೆಣ್ಣುಮಕ್ಕಳಿಗೆ ಅಗೌರವ ಮಾಡಿದ್ದಾರೆ

ಮಹಿಳೆಯರು ದಾರಿ ತಪ್ಪಿದ್ದಾರೆ ಎಂದು ಹೇಳಿ, ಹೆಣ್ಣು ಮಕ್ಕಳನ್ನು ಅಗೌರವದಿಂದ ಕಂಡಿದ್ದಾರೆ. ಮಾಧ್ಯಮಗಳಲ್ಲಿ ಅವರ ಕರ್ಮಕಾಂಡ ತೋರಿಸು ತ್ತಿದ್ದರು. ಇದರ ವಿರುದ್ಧ ಹೊಸ ಕಾನೂನು ಮಾಡ ಬೇಕು ಎಂದು ಯಾರೋ ಹೇಳುತ್ತಿರುವುದನ್ನು ನಾನು ಕೇಳಿದೆ ಎಂದರು. ಸಂಸದನೊಬ್ಬ ಹೆಣ್ಣುಮಕ್ಕಳೊಂದಿಗೆ ಅಗೌರವದಿಂದ ನಡೆದುಕೊಂಡಿದ್ದಾರೆ ಎನ್ನುವ ಆರೋಪಕ್ಕೆ ಪ್ರತಿಕ್ರಿಯಿಸಿದ ಡಿಕೆಶಿ, ಈ ಬಗ್ಗೆ ದೇವೇಗೌಡರು, ಕುಮಾರಸ್ವಾಮಿ, ಡಾ.ಮಂಜು ನಾಥ್, ರೇವಣ್ಣ ಅವರನ್ನು ಕೇಳಿ. ನಾನು ಉತ್ತರ ಕೊಡಲು ಆಗುವುದಿಲ್ಲ. ಅವರ ಆಚಾರ ವಿಚಾರ ಎಲ್ಲವೂ ಅವರೇ. ನನಗೆ ಇದನ್ನು ನೋಡಿ ಅವಮಾನ ವಾಗುತ್ತಿದೆ ಎಂದರು

ಕಾಂಗ್ರೆಸ್ ನಾಯಕರ ಮೇಲೆ ಐಟಿ ದಾಳಿ: ಐಟಿ ದಾಳಿ ವಿಚಾರವಾಗಿ ಕೇಳಿದಾಗ ಕೇವಲ ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿ ದಾಳಿ ಮಾಡಲಾಗು ತ್ತಿದೆ. ಐಟಿ ಅಧಿಕಾರಿಗಳು ಒಂದು ಪಕ್ಷದ ಏಜೆಂಟ ರಂತೆ ವರ್ತಿಸುತ್ತಿದ್ದಾರೆ. ಒಬ್ಬ ಬಿಜೆಪಿಯವರನ್ನು ಹಿಡಿದಿಲ್ಲ. ಐಟಿ ಅಧಿಕಾರಿಗಳಿಂದ ನಾನು ಇದನ್ನು ನಿರೀಕ್ಷೆ ಮಾಡಿರಲಿಲ್ಲ. ನಮ್ಮ ಬ್ಲಾಕ್ ಅಧ್ಯಕ್ಷನಿಗೆ ಐಟಿ ಅಧಿಕಾರಿಯೊಬ್ಬ ಕಾಂಗ್ರೆಸ್‌ನಲ್ಲಿ ಏಕೆ ಇದ್ದಿಯಾ, ಬಿಜೆಪಿಗೆ ಹೋಗು ಎಂದು ಹೇಳುತ್ತಾರೆ. ಸುರೇಶ್ ಕಾರು ಚಾಲಕ ರಘು ಎಂಬಾತನ ಮಗ, ಹೆಂಡತಿಗೆ ಚಿತ್ರಹಿಂಸೆ ನೀಡಿದ್ದಾರೆ. ಎಲ್ಲರಿಗೂ ಕಿರುಕುಳ ನೀಡುತ್ತಿದ್ದು, ಏನೇನು ಕಿರುಕುಳ ನೀಡಿದರು ಎಂದು ಚುನಾವಣೆ ಮುಗಿದ ನಂತರ ಎಲ್ಲರಿಂದಲೂ ಅಫಿಡವಿಟ್ ಸಲ್ಲಿಸಲಿದ್ದೇನೆ. ಕಿರುಕುಳದ ವಿರುದ್ಧ ಡಿಜಿ ಅವರನ್ನು ಭೇಟಿ ಮಾಡಿ ದೂರು ನೀಡಲಿದ್ದೇನೆ ಎಂದರು.

ಎಲ್ಲಾ ವರ್ಗದ ಜನ ಕಾಂಗ್ರೆಸ್ ಪರ ನಿಲ್ಲುತ್ತಾರೆ

ಕರ್ನಾಟಕದ ಜನರು ಉತ್ತಮ ತೀರ್ಪು ನೀಡಲಿದ್ದಾರೆ. ಅದರಲ್ಲೂ ಮಹಿಳೆಯರು ಕಾಂಗ್ರೆಸ್ ಪಕ್ಷದ ಪರವಾಗಿ ನಿಲ್ಲಲಿದ್ದಾರೆ. ಯುವಕರಿಗೆ, ಮಹಿಳೆಯರಿಗೆ 1 ಲಕ್ಷ ಹಣ, 25 ಲಕ್ಷ ಆರೋಗ್ಯ ವಿಮೆ ಸೇರಿದಂತೆ ಅನೇಕ ಭರವಸೆಗಳನ್ನು ನೀಡಿದ್ದೇವೆ.

ಕಾಂಗ್ರೆಸ್ ಪಕ್ಷ ಉತ್ತಮ ಪ್ರಣಾಳಿಕೆ ನೀಡಿದೆ. ಗ್ಯಾರಂಟಿ ಮೂಲಕ ನುಡಿದಂತೆ ನಡೆದಿದ್ದೇವೆ, ಕೊಟ್ಟ ಮಾತು ಉಳಿಸಿಕೊಂಡಿದ್ದೇವೆ. ಯುವಕರ ಬಾಳಿನಲ್ಲಿ ಕಾಂಗ್ರೆಸ್ ಬದಲಾವಣೆ ತರಲಿದೆ ಆದ ಕಾರಣ ಮೊದಲ ಬಾರಿಗೆ ಮತದಾನ ಮಾಡುತ್ತಿರುವ ಯುವ ಜನರು ಜವಾಬ್ದಾರಿಯಿಂದ ಮತ ಚಲಾಯಿಸಲಿ ದ್ದಾರೆ. ಗ್ಯಾರಂಟಿ ಯೋಜನೆಗಳು ಜನರ ಕಷ್ಟ ನಿವಾರಣೆ ಮಾಡಿವೆ. ಅದರಲ್ಲೂ ಮಹಿಳೆಯರಿಗೆ ಅನುಕೂಲವಾಗಿದೆ. ಮಹಿಳೆಯರು ಬಹಳ ಸಂತೋಷದಿಂದ ಮತದಾನದಲ್ಲಿ ಭಾಗವಹಿಸುತ್ತಿ ದ್ದಾರೆ. ನಾವು ಸುಮಾರು 20 ಕ್ಕೂ ಹೆಚ್ಚು ಸ್ಥಾನಗಳಲ್ಲಿ ಗೆಲ್ಲುವ ಸೂಚನೆ ಇದೆ. ಮೊದಲ ಹಂತದ 14 ಕ್ಷೇತ್ರದಲ್ಲಿ 10 ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುತ್ತೇವೆ. ಒಟ್ಟು 20 ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುತ್ತೇವೆ. ಇದು ಜ್ಯೋತಿಷ್ಯವಲ್ಲ, ರಾಜಕೀಯ ಪಾಂಡಿತ್ಯ. ಗೌಡರ ಕುಟುಂಬ ಸೇರಿದಂತೆ 4 ಸ್ಥಾನವೂ ಬರವುದಿಲ್ಲ ಎಂದು ವ್ಯಂಗ್ಯವಾಡಿದರು.

ಹತಾಶೆಯಿಂದ ಮಾತಾಡುತ್ತಿರುವ ಪಿಎಂ

ಪ್ರಧಾನಿಗಳೇ ಹತಾಶರಾಗಿ ಮಂಗಳಸೂತ್ರದ ಬಗ್ಗೆ ಮಾತನಾಡುತ್ತಿದ್ದಾರೆ. ಅವರ ಸ್ಥಾನಕ್ಕೆ ತಕ್ಕಂತೆ ಮಾತನಾಡುತ್ತಿಲ್ಲ. ಸಮಾಜದಲ್ಲಿ ಅಸಮಾನತೆ ಇರಬಾರದು ಎಂದು ಹೇಳಬೇಕಾದವರೆ ಅಲ್ಪಸಂಖ್ಯಾತರ ಬಗ್ಗೆ ಮಾತನಾಡುತ್ತಿದ್ದಾರೆ. ನಾವು ಸಂವಿಧಾನದ ಮೇಲೆ ಪ್ರಮಾಣ ಮಾಡಿರುತ್ತೇವೆ. ಬೇಧ ಭಾವ ಮಾಡುವುದು ಅಪರಾಧ ಎಂದರು.

ಜನರು ಕಿಟಕಿ, ಬಾಗಿಲು ತೆರೆದುಕೊಂಡಿರಿ ಬೆಳಕು ನಿಮ್ಮ ಮನೆಗೆ ಬರಲಿದೆ. ಬಿಜೆಪಿಗೆ 10 ವರ್ಷ ಕೊಟ್ಟರೂ ಏನೂ ಕೆಲಸ ಮಾಡಿಲ್ಲ. ದೇಶದ, ರಾಜ್ಯದ ಜನರಿಗೆ ಸುವರ್ಣ ಅವಕಾಶ. ಕಾಂಗ್ರೆಸ್ ಬದುಕಿನ ರಾಜಕಾರಣ ಮಾಡಿದೆ, ಅವರು ಬದುಕಿನ ಭಾವನೆ ಮೇಲೆ ರಾಜಕೀಯ ಮಾಡಿದ್ದಾರೆ. ಬಿಜೆಪಿ ಬಡವರಿಗೆ ಏನೂ ಮಾಡಿಲ್ಲ. ಶೋಭಕ್ಕ ಒಂದು ಕಾಲದಲ್ಲಿ ಸೀರೆ, ಸೈಕಲ್ ಕೊಟ್ಟಿದ್ದರು ಅದು ಬಿಟ್ಟರೇ ಏನೂ ಮಾಡಿಲ್ಲ. ಮನಮೋಹನ್ ಸಿಂಗ್ ಸೇರಿದಂತೆ ಕಾಂಗ್ರೆಸ್ ಕೊಟ್ಟ ಯಾವುದೇ ಕಾರ್ಯಕ್ರಮ ಗಳನ್ನು ಅವರಿಗೆ ನಿಲ್ಲಿಸಲು ಆಗಲಿಲ್ಲ ಎಂದರು.

2015-16ನೇ ಸಾಲಿನ ಪಿಯು ರಸಾಯನಶಾಸ್ತ್ರ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ

17 ಆರೋಪಿಗಳ ಖುಲಾಸೆಗೊಳಿಸಿ ಆದೇಶ

ಬೆಂಗಳೂರು: 2015-16ನೇ ಸಾಲಿನ ಪಿಯು ರಸಾಯನಶಾಸ್ತ್ರ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ 17 ಆರೋಪಿಗಳನ್ನು ಖುಲಾಸೆ ಗೊಳಿಸಿ ಬೆಂಗಳೂರು ಸೆಷನ್ಸ್ ಕೋರ್ಟ್ ಆದೇಶ ಹೊರಡಿಸಿದೆ.

2016ರ ಮಾರ್ಚ್ 21ರಂದು ದ್ವಿತೀಯ ಪಿಯು ರಸಾಯನಶಾಸ್ತ್ರ ಪರೀಕ್ಷೆ ನಡೆದಿತ್ತು. ಅದೇ ದಿನ ದಿನ ಬೆಳಗ್ಗೆ 7.30ಕ್ಕೆ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿ ವಾಟ್ಸ್‌ಆಪ್‌ನಲ್ಲಿ ಹರಿದಾಡಿತ್ತು. ಈ ಸಂಬಂಧ ಮಲ್ಲೇಶ್ವರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಬಳಿಕ ಪ್ರಕರಣ ಸಿಐಡಿಗೆ ವರ್ಗಾವಣೆಗೊಂಡಿತ್ತು. ಈ ಪ್ರಕರಣ ವನ್ನು ತನಿಖೆ ನಡೆಸಿದ್ದ ಸಿಐಡಿ ಅಧಿಕಾರಿಗಳು ಒಟ್ಟು 18 ಆರೋಪಿಗಳ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿತ್ತು. ಆದ್ರೆ, ವಿಚಾರಣಾ ಹಂತದಲ್ಲಿಯೇ ಓರ್ವ ಆರೋಪಿ ಸಾವನ್ನಪ್ಪಿದ್ದ. ಇನ್ನುಳಿದ ಆರೋಪಿಗಳನ್ನು ಇದೀಗ ನ್ಯಾಯಾಲಯದ ಖುಲಾಸೆಗೊಳಿಸಿದೆ.

ದ್ವಿತೀಯ ಪಿಯುಸಿ ರಸಾಯನಶಾಸ್ತ್ರ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ ವಿಧಾನಸಭೆಯ ಉಭಯ ಸದನಗಳಲ್ಲಿ ಪ್ರತಿಧ್ವನಿಸಿತ್ತು. ಸರಕಾರ ವಿಧಾರ್ಥಿಗಳ ಭವಿಷ್ಯದ ಜತೆ ಚೆಲ್ಲಾಟ ವಾಡುತ್ತಿದೆ ಎಂದು ತರಾಟೆಗೆ ತೆಗೆದು ಕೊಂಡಿ ದ್ದರು. ಕಾಂಗ್ರೆಸ್ ಶಾಸಕ ರಫೀಕ್ ಅಹಮದ್ ವಿಷಯ ಪ್ರಸ್ತಾಪಿಸಿದ್ದರು. ಅದಕ್ಕೆ ಧ್ವನಿಗೂಡಿಸಿದ್ದ ಬಿಜೆಪಿಯ ಸದಸ್ಯರಾದ ಸುರೇಶ್‌ಕುಮಾರ್ ಹಾಗೂ ಸಿಟಿ ರವಿ ಸರಕಾರ ಏನು ಮಾಡುತ್ತಿದೆ? ಪ್ರತಿ ವರ್ಷ ಈ ರೀತಿ ಪ್ರಶ್ನೆ ಪತ್ರಿಕೆ ಪ್ರಕರಣಗಳು ನಡೆಯುತ್ತಲೇ ಇವೆ. ಆದರೂ ಸರಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿಲ್ಲ. ಪದವಿ ಪೂರ್ವ ಶಿಕ್ಷಣ ಇಲಾಖೆಯ ಕಾರ್ಯ ವೈಖರಿಯೇ ಸಂಶಯಾಸ್ಪದವಾಗಿದೆ ಎಂದು ದೂರಿದ್ದರು.

7 ವರ್ಷದ ಮಗುವಿನ ಮೇಲೆ ಅತ್ಯಾಚಾರ

ಬೆಂಗಳೂರು: ಪಾನಿಪೂರಿ ಕೊಡಿಸುವ ನೆಪದಲ್ಲಿ ಭಿಕ್ಷುಕಿಯ ಏಳು ವರ್ಷದ ಮಗಳನ್ನು ಕರೆದೊಯ್ದ 54 ವರ್ಷದ ವ್ಯಕ್ತಿಯೊಬ್ಬ ಬಾಲಕಿ ಮೇಲೆ ಅತ್ಯಾಚಾರ ವೆಸಗಿದ ಘಟನೆ ಅಶೋಕನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಗರುಡಮಾಲ್ ಬಳಿ ಭಿಕ್ಷೆ ಬೇಡುತ್ತಿದ್ದ ಮಾತು ಬಾರದ ಮಹಿಳೆಯ ಪುತ್ರಿಯನ್ನು ಪಾನಿಪೂರಿ ಕೊಡಿಸುವುದಾಗಿ ಕರೆದೊಯ್ದ ಕಾಮುಕ ರಸ್ತೆ ಪಕ್ಕದ ಹಿಟಾಚಿ ಕೆಳಗೆ ಅತ್ಯಾಚಾರ ಎಸಗಿದ್ದಾನೆ.

ಅತ್ಯಾಚಾರ ಎಸಗಿದ ವ್ಯಕ್ತಿಯೂ ನಿರ್ವಸತಿ ವ್ಯಕ್ತಿ ಎಂದು ತಿಳಿದು ಬಂದಿದ್ದು, ಆರೋಪಿಯನ್ನು ಬಂಧಿಸಿರುವ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

ತನ್ನ ಜತೆಗಿದ್ದ ಪುತ್ರಿ ಕಾಣಿಸಿಕೊಳ್ಳದೇ ಇದ್ದಾಗ ಆತಂಕಗೊಂಡ ಮಹಿಳೆ ಸುತ್ತ ಹುಡುಕಾಡಿದಾಗ ರಸ್ತೆ ಬದಿ ನಿಂತಿದ್ದ ಹಿಟಾಚಿ ಬಳಿ ಮಗು ಅಳುತ್ತಾ ನಿಂತಿತ್ತು. ಆಕೆಯನ್ನು ತಾಯಿ ಮತ್ತು ಸ್ಥಳೀಯರು ರಕ್ತಸ್ರಾವವಾಗುತ್ತಿತ್ತು.

ಹೀಗಾಗಿ ಪರಿಶೀಲಿಸಿದಾಗ ಅತ್ಯಾಚಾರ ನಡೆಸಿರುವುದು ಗೊತ್ತಾಗಿ ಪೊಲೀಸರಿಗೆ ದೂರು ನೀಡಲಾಗಿದೆ. ಅದರಂತೆ ಪ್ರಕರಣ ದಾಖಲಿಸಿಕೊಂಡ ಪೊಲೀಸರು ಬಾಲಕಿಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ್ದಾರೆ.

NOTICE
Titan Company Limited
Registered office: 3, Sipcot Industrial Complex, Hosur 635126

NOTICE is hereby given that the certificate for the under mentioned securities of the Company have been lost/misplaced and the holder of said securities have applied to the Company to issue duplicate certificate.
Any person who has a claim in respect of the said securities should lodge such claim with the Company at its Registered Office within 15 days from this date, else the Company will proceed to issue duplicate certificate without further intimation.

Name of the holder	No. of Securities and Face Value	Folio no.	Certificate no.	Distinctive no.
Polavaram Vanamali	2000 Equity Shares of Face Value Re. 1/-	TWP0008190	1162	3218321 - 3220320

Place : Bengaluru
Date: 27/04/2024
Name of Applicant : Kalyani Polavaram

ವಿ+ ಸೋಮವಾರ

(This is not a Prospectus Announcement. This is a Corrigendum Advertisement)

RACKS & ROLLERS
STORAGE TECHNOLOGIES AND AUTOMATION

STORAGE TECHNOLOGIES & AUTOMATION LIMITED

Corporate Identification Numbers (CIN): U74900KA2010PLC052918

Our Company was originally incorporated as "Company Limited by Shares" under the name "Storage Technologies and Automation Private Limited" under the provisions of the Companies Act, 1956 and the Certificate of Incorporation was issued by Registrar of Companies, Bangalore on March 19, 2010, vide certificate of incorporation bearing CIN U74900KA2010PTC052918 issue by Central Registration Centre, Assistant Registrar of Companies, Karnataka. Subsequently, our Company was converted into a public limited company vide special resolution passed by the shareholders at the Extra Ordinary General Meeting held on August 31, 2023 and consequently the name of our Company was changed from "Storage Technologies and Automation Private Limited " to "Storage Technologies and Automation Limited" vide fresh Certificate of Incorporation granted to our Company consequent upon conversion into public limited company dated October 12, 2023 by the Registrar of Companies, Bangalore bearing Corporate Identification Number U74900KA2010PLC052918. For details of change in the name and registered office of our Company, please refer to chapter titles "History and Corporate Structure" beginning on page no 127 of the Red Herring Prospectus.

Registered Office: No 10, Survey No 21/6A, 21/7A, 21/7B and 21/8 Singanayakanahalli, Yelahanka, Bangalore, Karnataka, India, 560064; **Tel No.:**+91 98444 86300; **Email:** cs@racksandrollers.com; **Website:** https://racksandrollers.com; **Contact Person:** Ms. Theja Raju, Company Secretary & Compliance Officer

CORRIGENDUM-NOTICE TO INVESTORS

This Corrigendum is with respect to the Red Herring Prospectus (RHP) dated April 22, 2024, please note the following:

1. On page 272 of RHP, under head Payment into Escrow Account for Anchor Investors, please read for the Anchor Investors, the payment instruments for payment into the Escrow Account should be drawn in favour of as follows:
   a. In case of resident Anchor Investors: - "Escrow Account Storage Technologies and Automation Limited Anchor Investor-R"
   b. In case of Non-Resident Anchor Investors: - "Escrow Account Storage Technologies and Automation Limited Anchor Investor-NR"
2. On page 46 of the RHP in risk factor point no 47, the page no reference for object of the issue was inadvertently mentioned as 86 instead 80.
3. In RHP, please read designation of Hanif A Khatri as "Executive Director and Chairman" instead of 'Whole Time Director and Chairman' and the designation of Mohammad Arif Abdul Gaffar Dor as "Managing Director" instead of 'Whole Time Director and Managing Director'.
4. On page 135 and 139 of RHP, Qualification of Mr. Fayaz Gangjee, Independent Director to be read as "Bachelor of Technology" instead of 'Bachelor of Engineering'.

INVESTORS MAY PLEASE NOTE THE RED HERRING PROSPECTUS, PROSPECTUS, THE APPLICATION FORMS, THE ABRIDGED PROSPECTUS. GENERAL INFORMATION DOCUMENT AND NEWSPAPWER ADVERTISEMENT SHALL BE READ IN CONJUNCTION WITH THIS CORRIGENDUM.

On behalf of Board of Directors
For Storage Technologies and Automation Limited
Sd/-
Ms. Theja raju
Company Secretary & Compliance Officer

Place: Bangalore
Date: April 26, 2024

Disclaimer: Storage Technologies and Automation Limited is proposing, subject to applicable statutory and regulatory requirements, receipt of requisite approvals, market conditions and other considerations, to make an initial public offer of its Equity Shares and has filed the RHP with the Registrar of Companies, Bangalore on April 22, 2024 and thereafter with SEBI and the Stock Exchange. The RHP is available on the website of BSE at www.bsesme.comand is available on the websites of the BRLM at www.oneviewadvisors.com. Any potential investors should note that investment in equity shares involves a high degree of risk and for details relating to the same, please refer to the RHP including the section titled "Risk Factors" beginning on page 30 of the Red Herring Prospectus.The Equity Shares have not been and will not be registered under the U.S.